**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವಿ ಸಂಕನೂರ (ವಿಧಾನಸಭೆಯಿಂದ ಚುನಾಯಿತರಾದರು) ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಹೇಳಿಕೆ.**

**ಸೂಚನೆ:-**

ಕಳೆದ 3 ವರ್ಷಗಳಿಂದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ಬಾಲನ್ಯಾಯ ಮಂಡಳಿ ಹಾಗೂ ಮಕ್ಕಳ ಕಲ್ಯಾಣ ಸಮಿತಿಗಳು ಪರಿಪೂರ್ಣವಾಗಿ ರಚನೆ ಆಗದೇ ಬಾಲಾಪರಾಧಿಗಳು ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಬಾಕಿ ಉಳಿದು ಸಾವಿರಾರು ಮಕ್ಕಳ ಪರಿವೀಕ್ಷಣಾಲಯಗಳಲ್ಲಿ / ಬಾಲಮಂದಿರಗಳಲ್ಲಿ ಬಂಧಿಯಾಗಿ ಕಷ್ಟ ಅನುಭವಿಸುವ ಸ್ಥಿತಿ ನಿರ್ಮಾಣ ಆಗಿರುವುದನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರ ಗಮನಕ್ಕೆ ತರುವುದು.

**ಉತ್ತರ**

ರಾಜ್ಯದಲ್ಲಿ 31 ಜಿಲ್ಲೆಗಳಿಂದ ಬಾಲನ್ಯಾಯ ಮಂಡಳಿ ಹಾಗೂ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು / ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನಿಸಿ ರಾಜ್ಯ ಆಯ್ಕೆ ಸಮಿತಿಯ ಮುಖಾಂತರ 30 ಜಿಲ್ಲೆಗಳ ಸಂದರ್ಶನ ಮುಕ್ತಾಯವಾಗಿದ್ದು, ಆಯ್ಕೆಯಾಗಿರುವ ಅಧ್ಯಕ್ಷರು ಮತ್ತು ಸದಸ್ಯರ ಅಂತಿಮ ಪಟ್ಟಿಯನ್ನು ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಸ್ವೀಕೃತವಾಗಿದ್ದು, ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.

ಮುಂದುವರೆದು, ಬೆಂಗಳೂರು ನಗರ ಜಿಲ್ಲೆಯ ಆಯ್ಕೆ ಪ್ರಕ್ರಿಯೆ ಮಾತ್ರ ಬಾಕಿ ಉಳಿದಿದ್ದು, ಸದರಿ ಸಂದರ್ಶನವನ್ನು ತ್ವರಿತವಾಗಿ ಮುಗಿಸಿ ಬಾಲನ್ಯಾಯ ಮಂಡಳಿ ಹಾಗೂ ಮಕ್ಕಳ ಕಲ್ಯಾಣ ಸಮಿತಿಗಳ ಆಯ್ಕೆಯಾದ ಅಧ್ಯಕ್ಷರು ಮತ್ತು ಸದಸ್ಯರ ಪಟ್ಟಿಯನ್ನು ಪ್ರತ್ಯೇಕವಾಗಿ ಸಲ್ಲಿಸಲಾಗುವುದು ಎಂದು ಮಕ್ಕಳ ರಕ್ಷಣಾ ನಿರ್ದೇಶನಾಲಯ ಇವರು ತಿಳಿಸಿದ್ದು, ಪ್ರಸ್ತಾವನೆ ಬಂದ ನಂತರ ಪರಿಶೀಲಿಸಲಾಗುವುದು.

ಪ್ರಸ್ತುತ ರಾಜ್ಯದಲ್ಲಿ 34 ಬಾಲನ್ಯಾಯ ಮಂಡಳಿಗಳು ಕಾರ್ಯನಿರ್ವಹಿಸುತ್ತಿದ್ದು, ಕಾನೂನು ಸಂಘರ್ಷಕ್ಕೊಳಗಾದ ಮಕ್ಕಳ ಪ್ರಕರಣಗಳನ್ನು ಸಕಾಲದಲ್ಲಿ ಇತ್ಯರ್ಥ ಮಾಡಲು ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಮಮಇ 91 ಮಭಾಬ 2024**

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.